# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕರ್ನಾಟಕ ರಾಜ್ಯದಲ್ಲಿರುವ ಬೌದ್ಧ ವಿಹಾರ (ದೇವಾಲಯ) ಗಳಿಗೆ ನವೀಕರಣ/ ದುರಸ್ಥಿ/ಜೀರ್ಣೋದ್ಧಾರಕ್ಕಾಗಿ ಸಹಾಯಾನುಧನ ಬಿಡುಗಡೆ ಮಾಡುವ ಬಗ್ಗೆ ಮಾರ್ಗಸೂಚಿಗಳು.

ಓದಲಾಗಿದೆ: 1 2016-17ನೇ ಸಾಲಿನ ಆಯವ್ಯಯ ಭಾಷಣ.

2 ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ ಆ.ಭಾಷಣ/ಸಿಆರ್-01/2016-17 ದಿನಾಂಕ:31-03-2016.

<><><>

ಪ್ರಸ್ತಾವನೆ:-

2016-17ನೇ ಸಾಲಿನಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ-216 ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಭೌದ್ಧ ಸಮುದಾಯದ ಭೌದ್ಧ ವಿಹಾರ (ದೇವಾಲಯ)ಗಳ ಜೀರ್ಣೋದ್ಧಾರಕ್ಕಾಗಿ ಅನುದಾನ ಒದಗಿಸಲಾಗುವುದೆಂದು ಘೋಷಿಸಲಾಗಿದೆ.

ಅದರಂತೆ, ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ರವರು ಮೇಲೆ (2)ರಲ್ಲಿ ಓದಲಾದ ಏಕಕಡತದಲ್ಲಿ ಕರ್ನಾಟಕ ರಾಜ್ಯದಲ್ಲಿರುವ ಬೌದ್ಧ ಸಮುದಾಯದ ಭೌದ್ಧ ವಿಹಾರ (ದೇವಾಲಯ)ಗಳಿಗೆ ನವೀಕರಣ/ದುರಸ್ಥಿ/ಜೀರ್ಣೋದ್ಧಾರಕ್ಕಾಗಿ ಸಹಾಯಾನುಧನ ಬಿಡುಗಡೆ ಮಾಡುವ ಬಗ್ಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಅದರಂತೆ, ಬೌದ್ಧ ಸಮುದಾಯದ ಭೌದ್ಧ ವಿಹಾರ (ದೇವಾಲಯ)ಗಳಿಗೂ ನವೀಕರಣ/ದುರಸ್ಥಿ/ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡಲು ಪ್ರತ್ಯೇಕ ಮಾರ್ಗಸೂಚಿಗಳನ್ನು ರಚಿಸುವುದು ಅಗತ್ಯವೆಂದು ಈ ಸಂಬಂಧ ಸಹಾಯಾನುದಾನ ಮಂಜೂರು ಮಾಡಲು ಮಾರ್ಗಸೂಚಿಗಳನ್ನು ರೂಪಿಸಲು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ.

## ಸರ್ಕಾರದ ಆದೇಶ ಸಂಖ್ಯೆ: MWD 140 MDS 2016, ಬೆಂಗಳೂರು, ದಿನಾಂಕ:24-09-2016

ಕರ್ನಾಟಕ ರಾಜ್ಯದಲ್ಲಿನ ಬೌದ್ಧ ವಿಹಾರ (ದೇವಾಲಯ)ಗಳಿಗೆ ನವೀಕರಣ/ದುರಸ್ಥಿ/ ಜೀರ್ಣೋದ್ಧಾರಕ್ಕಾಗಿ ಸಹಾಯಾನುದಾನ ಮಂಜೂರು ಮಾಡುವ ಈ ಯೋಜನೆಯನ್ನು ಆದೇಶಕ್ಕೆ **"ಅನುಬಂಧ-ಎ"** ರಲ್ಲಿ ಲಗತ್ತಿಸಿರುವ ಮಾರ್ಗಸೂಚಿಗಳೊಂದಿಗೆ ಜಾರಿಗೆ ತರಲು ಮಂಜೂರಾತಿ ನೀಡಲಾಗಿದೆ.

ಈ ಮಾರ್ಗಸೂಚಿಗಳು ತಕ್ಷಣದಿಂದ ಜಾರಿಗೆ ಬರುತ್ತವೆ. ಈ ಯೋಜನೆಗೆ ತಗಲುವ ವೆಚ್ಚವನ್ನು 2016-17ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:2225-03-277-2-82 **"ಜೈನ್ ಮತ್ತು ಬೌದ್ಧ ಸಮುದಾಯದ ಅಭಿವೃದ್ಧಿ"** ಅಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು, ಯಾವುದೇ ಕಾರಣಕ್ಕೂ ಹೆಚ್ಚುವರಿ ಅನುದಾನ ಕೋರತಕ್ಕದ್ದಲ್ಲ.

......2

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 348 ವೆಚ್ಚ-3/2016 ದಿ: 12-05-2016 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 42 ಐಎಂಎಂ 2016 ದಿ:23-08-2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ನಾಗರತ್ನ)
ಸರ್ಕಾರದ ಜಂಟಿ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಈ ಆದೇಶವನ್ನು ಮುಂದಿನ ಸಂಚಿಕೆಗಳಲ್ಲಿ ಪ್ರಕಟಿಸುವಂತೆ ಹಾಗೂ ಈ ಇಲಾಖೆಗೆ 200 ಪ್ರತಿಗಳನ್ನು ಒದಗಿಸುವಂತೆ ಕೋರಲಾಗಿದೆ.

ಪ್ರತಿ:-

1. ಮಹಾಲೇಖಪಾಲರು(ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. 20ನೇ ಮಹಡಿ, ವಿ.ವಿ. ಗೋಪುರ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್,
6. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ವಿ.ವಿ.ಗೋಪುರ, ಡಾ:ಅಂಬೇಡ್ಕರ್ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಯೋಜನಾ ಇಲಾಖೆ ಪಿಎಂಐ ವಿಭಾಗ ಬಹುಮಹಡಿ ಕಟ್ಟಡ ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3) ವಿಧಾನಸೌಧ ಬೆಂಗಳೂರು.
9. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು
10. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.(ನಿರ್ದೇಶಕರ ಮುಖಾಂತರ)
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.